# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 369 (444)**
**ಮಾನ್ಯ ಸದಸ್ಯರ ಹೆಸರು : ಶ್ರೀ ಮಧು ಜಿ.ಮಾದೇಗೌಡ (ಪದವೀಧರ ಕ್ಷೇತ್ರ)**
**ಉತ್ತರಿಸಬೇಕಾದ ದಿನಾಂಕ : 10.07.2023**
**ಉತ್ತರಿಸಬೇಕಾದ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**

| ಕ್ರ | ಪ್ರಶ್ನೆಗಳು | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಿಂದ ಸ್ಥಗಿತವಾಗಿರುವ ಶಾಲಾ ಹೆಣ್ಣು ಮಕ್ಕಳಿಗೆ ಸ್ಯಾನಿಟರಿ ನ್ಯಾಪ್ಕಿನ್ ಪ್ಯಾಡ್ ವಿತರಿಸುವ "ಶುಚಿ" ಯೋಜನೆಯನ್ನು ಪ್ರಸಕ್ತ ವರ್ಷ ಆರಂಭಿಸಲಾಗುವುದೇ; | ಪ್ರಸ್ತುತ ಸಾಲಿನಲ್ಲಿ ಶುಚಿ ಯೋಜನೆಯಡಿ ಸ್ಯಾನಿಟರಿ ನ್ಯಾಪ್ಕಿನ್ ಪ್ಯಾಡ್‌ಗಳನ್ನು ವಿತರಿಸಲು ಕ್ರಮ ಕೈಗೊಳ್ಳಲಾಗುವುದು. |
| ಆ) | ಹಾಗಿದ್ದಲ್ಲಿ,ಶುಚಿ ಯೋಜನೆಯಡಿ ಮಕ್ಕಳಿಗೆ ಯಾವ ಮಾಹೆಯಿಂದ ಸ್ಯಾನಿಟರಿ ನ್ಯಾಪ್ಕಿನ್ ಪ್ಯಾಡ್‌ಗಳು ದೊರೆಯಬಹುದು. ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಶುಚಿ ಕಾರ್ಯಕ್ರಮದಡಿ ಸ್ಯಾನಿಟರಿ ನ್ಯಾಪ್ಕಿನ್ ಪ್ಯಾಡ್‌ಗಳನ್ನು ಸಂಗ್ರಹಿಸಿ ಸರಬರಾಜು ಮಾಡಲು ಅಲ್ಪಾವಧಿ ಟೆಂಡರ್ ಅನ್ನು ಆಹ್ವಾನಿಸಲು ಸೂಚನೆ ನೀಡಲಾಗಿದೆ.<br><br>ಇದರಂತೆ KSMSCL ವತಿಯಿಂದ ಶೀಘ್ರದಲ್ಲಿ ಅಲ್ಪಾವಧಿ ಟೆಂಡರ್ ಅನ್ನು ಕರೆಯಲಾಗುವುದು.<br>ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡು 60- ದಿನಗಳಲ್ಲಿ ಸರಬರಾಜು ಪೂರ್ಣಗೊಳಿಸಲಾಗುವುದು. |
| ಇ) | ಈ ಯೋಜನೆಯ ಲಾಭ ಸರಾಸರಿ ಎಷ್ಟು ಮಕ್ಕಳಿಗೆ ದೊರೆಯಬಹುದು, ಯೋಜನೆಯ ಜಾರಿಗಾಗಿ ಎಷ್ಟು ಅನುದಾನ ಅವಶ್ಯಕತೆಯಿದೆ;(ವಿವರ ನೀಡುವುದು) | • ಗುರುತಿಸಲಾದ ಒಟ್ಟು ಫಲಾನುಭವಿಗಳು 19,29,355<br>• ಇದಕ್ಕಾಗಿ ರೂ.4700.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ. |
| ಈ) | ಬಳಕೆ ಮಾಡಲಾದ ಸ್ಯಾನಿಟರಿ ನ್ಯಾಪ್ಕಿನ್ ಪ್ಯಾಡ್‌ಗಳನ್ನು ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡಲು ತೆಗೆದುಕೊಂಡಿರುವ ಅಗತ್ಯ ಕ್ರಮಗಳೇನು; | • ಶಾಲೆಯಲ್ಲಿ ಹೆಣ್ಣು ಮಕ್ಕಳು ಬಳಸಿದ ಸ್ಯಾನಿಟರಿ ನ್ಯಾಪ್ಕಿನ್ ಪ್ಯಾಡ್ ಗಳನ್ನು ಒಂದು ಕಾಗದದಲ್ಲಿ ಸುತ್ತಿ ಸ್ಯಾನಿವೇಸ್ಟ್ ಬುಟ್ಟಿಯಲ್ಲಿ ವಿಲೇವಾರಿ ಮಾಡಲು ಅಗತ್ಯ ವ್ಯವಸ್ಥೆ ಕಲ್ಪಿಸುವಂತೆ ಶಿಕ್ಷಣ ಇಲಾಖೆಗೆ ತಿಳಿಸಲಾಗಿರುತ್ತದೆ.<br>• ಇಲಾಖೆ ವತಿಯಿಂದ ಶುಚಿ ಕಾರ್ಯಕ್ರಮದಡಿ ವಿತರಿಸಲಾಗುತ್ತಿರುವ ಸ್ಯಾನಿಟರಿ ನ್ಯಾಪ್ಕಿನ್ ಪ್ಯಾಡ್ ಗಳ ಪೊಟ್ಟಣಗಳ ಮೇಲೆ ಬಳಸಿದ ಸ್ಯಾನಿಟರಿ ನ್ಯಾಪ್ಕಿನ್ ಪ್ಯಾಡ್ ಗಳ ವೈಜ್ಞಾನಿಕ ವಿಲೇವಾರಿ ಕುರಿತು ಸ್ಪಷ್ಟ ಮಾಹಿತಿ ಮತ್ತು ಚಿತ್ರಣ ನೀಡಲಾಗಿರುತ್ತದೆ. |
| ಉ) | ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ನಿರ್ದೇಶನಗಳಂತೆ ಬಳಸಿದ ಸ್ಯಾನಿಟರಿ ನ್ಯಾಪ್ಕಿನ್ ಪ್ಯಾಡ್‌ಗಳ ವಿಲೇವಾರಿಯು ಕಡ್ಡಾಯವಾಗಿ ಮಾನ್ಯತೆ ಪಡೆದ ಏಜೆನ್ಸಿ/ಸಂಸ್ಥೆಗಳಿಂದ ಮಾತ್ರ ಸಂಗ್ರಹಣೆ ಮತ್ತು ವಿಲೇವಾರಿ ನಿರ್ವಹಣೆ ನಿರ್ವಹಿಸಬೇಕಿರುವುದರಿಂದ ಗುರುತಿಸಿರುವ ಏಜೆನ್ಸಿ/ಸಂಸ್ಥೆಗಳು ಯಾವುವು? (ಜಿಲ್ಲಾವಾರು ಮಾಹಿತಿ ನೀಡುವುದು) | 2023-24ನೇ ಸಾಲಿನ ಸಂಗ್ರಹಣೆ ಮತ್ತು ಅನುಷ್ಠಾನ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಸದರಿ ಪ್ರಕ್ರಿಯೆಗಳು ಪೂರ್ಣಗೊಂಡ ನಂತರ ಆರೋಗ್ಯ ಇಲಾಖೆಯಡಿ ಆರೋಗ್ಯ ಕೇಂದ್ರ/ಆಸ್ಪತ್ರೆಗಳಿಗೆ ಜೈವಿಕ ತ್ಯಾಜ್ಯದ ವಿಲೇವಾರಿ ಸೇವೆಯನ್ನು ಒದಗಿಸುತ್ತಿರುವ ಮಾನ್ಯತೆ ಪಡೆದ ಏಜೆನ್ಸಿ/ಸಂಸ್ಥೆಗಳಿಂದ ಸದರಿ ಶಾಲಾ-ಕಾಲೇಜುಗಳಲ್ಲಿನ ಬಳಸಿದ ನ್ಯಾಪ್ಕಿನ್ ಪ್ಯಾಡ್‌ಗಳ ವಿಲೇವಾರಿಗೆ ನಿರ್ದೇಶನ ನೀಡಲಾಗುವುದು. |

**ಸಂಖ್ಯೆ: ಆಕುಕ 50 ಎಸ್.ಟಿ.ಕ್ಯೂ 2023**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು